# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ಇ-27069/22-23

ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 17/1/2023

**ಕಛೇರಿ ಆದೇಶ**

ವಿಷಯ: ಶ್ರೀ ಎಂ. ಸಿ. ಲಕ್ಷ್ಮೀಶ, ಕಾರ್ಯಪಾಲಕ ಅಭಿಯಂತರರು ಇವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ: ಮುಖ್ಯ ಅಭಿಯಂತರರು (ಒ.ಎಫ್.ಸಿ) ವಿಭಾಗ ರವರ ವರದಿ ದಿ: 03-01-2023

----------

ಶ್ರೀ ಎಂ. ಸಿ. ಲಕ್ಷ್ಮೀಶ, ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯಪಾಲಕ ಅಭಿಯಂತರರು (ಒ.ಎಫ್.ಸಿ) ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಉಲ್ಲೇಖಿತದ ವರದಿಯನ್ವಯ ಇವರ ವಿರುದ್ಧ ಹಲವು ದೂರುಗಳು ಬರುತ್ತಿದ್ದು, ಸದರಿಯವರ ಕಾರ್ಯನಿರ್ವಹಣೆಯು ಸಮರ್ಪಕವಾಗಿಲ್ಲದೆ ಇರುವುದರಿಂದ ಇವರ ಸೇವೆಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಅವಶ್ಯಕತೆ ಇಲ್ಲವೆಂದು ಪರಿಗಣಿಸಿ, ಸದರಿಯವರನ್ನು ತಕ್ಷಣದಿಂದ ಜಾರಿಗೆ ಬರುವಂತೆ, ಈ ಕೆಳಕಂಡ ಷರತ್ತಿಗೊಳಪಡಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಿ ಆದೇಶಿಸಿದೆ.

**ಷರತ್ತುಗಳು:-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
4. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್‌ಕಾರ್ಡ್, ಹೆಲ್ಮಾರ್ಡ್, ಗುರುತಿನ ಚೀಟಿ (Identity card) ಹಾಗೂ ಲ್ಯಾಪ್ ಟಾಪ್‌ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದ ಮೇರೆಗೆ)

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

17/1/2023 17/1/2023 17/1

**ಪ್ರತಿಯನ್ನು :**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ವಲಯ ಆಯುಕ್ತರು (ಪೂರ್ವ) ವಲಯ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು ರವರಿಗೆ ಕಳುಹಿಸಿದೆ.
: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ರವರಿಗೆ ಕಳುಹಿಸಿದೆ.
: ಪ್ರಧಾನ ಅಭಿಯಂತರರು / ಮುಖ್ಯ ಅಭಿಯಂತರರು (ಒ.ಎಫ್.ಸಿ) ಬಿ.ಬಿ.ಎಂ.ಪಿ ರವರಿಗೆ ಕಳುಹಿಸಿದೆ
: ಕಾ.ಪಾ.ಅ (ಒ.ಎಫ್.ಸಿ) ವಿಭಾಗ ರವರಿಗೆ ಕಳುಹಿಸಿದೆ.
: ಮು.ಲೆ.ಅ / ಮು.ಲೆ.ಪ ರವರಿಗೆ / ಉಪ ನಿಯಂತ್ರಕರು (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.
: ನಿರ್ದೇಶಕರು, ಮಾಹಿತಿ ತಂತ್ರಜ್ಞಾನ, ಬಿ.ಬಿ.ಎಂ.ಪಿ ರವರಿಗೆ ಮಾಹಿತಿಗಾಗಿ.

FDC 25/01/23

24/1/23 ನಿರ್ದೇಶಕರು ಮಾಹಿತಿ ತಂತ್ರಜ್ಞಾನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

DIRIT/OL/152/22-23 23-01-2023